# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಮೂರನೆಯ ಅಧಿವೇಶನ

## (ಮುಂದುವರೆದ ಉಪವೇಶನ)

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ: 17ನೇ ಮಾರ್ಚ್, 2021**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನಾಲ್ಕನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:**

01) 10ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಪಿ.ಆರ್. ರಮೇಶ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 140 (1028)

02) 10ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಎಂ.ಎ. ಗೋಪಾಲಸ್ವಾಮಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 146 (908)

: ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

03) 10ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಯು.ಬಿ. ವೆಂಕಟೇಶ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 149 (882)

: ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು

04) 12ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಶಾಂತರಾಮ ಬುಡ್ನ** ಸಿದ್ದಿ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 173 (1082)

ಮಾನ್ಯ ಸಮಾಜ ಕಲ್ಯಾಣ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನಾಲ್ಕನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.**

01. ಕರ್ನಾಟಕ ಲೇವಾದೇವಿದಾರರ (ತಿದ್ದುಪಡಿ) ವಿಧೇಯಕ, 2021

02. ಕರ್ನಾಟಕ ಪೌರಸಭೆಗಳ (ತಿದ್ದುಪಡಿ) ವಿಧೇಯಕ, 2021

## 03. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. **ಕರ್ನಾಟಕ ಲೇವಾದೇವಿದಾರರ (ತಿದ್ದುಪಡಿ) ವಿಧೇಯಕ, 2021**

ಶ್ರೀ ಎಸ್.ಟಿ. ಸೋಮಶೇಖರ್ (ಮಾನ್ಯ ಸಹಕಾರ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ಲೇವಾದೇವಿದಾರರ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. **ಕರ್ನಾಟಕ ಪೌರಸಭೆಗಳ (ತಿದ್ದುಪಡಿ) ವಿಧೇಯಕ, 2021**

ಶ್ರೀ ಎನ್. ನಾಗರಾಜು (ಎಂ.ಟಿ.ಬಿ.) (ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ಪೌರಸಭೆಗಳ (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 04. ವಿತ್ತೀಯ ಕಾರ್ಯಕಲಾಪ

2021-22ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಚರ್ಚೆ

**(ಮೂರನೇ ದಿನ)**

## 05. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀ ಎನ್. ರವಿಕುಮಾರ್** ಅವರು 2020-21ನೇ ಸಾಲಿನಲ್ಲಿ ರಾಜ್ಯದಲ್ಲಿ ಹೊಸದಾಗಿ 62 ನರ್ಸಿಂಗ್ ಮತ್ತು 40 ಅಲೈಡ್ ಹೆಲ್ತ್ ಸೈನ್ಸ್ ಕಾಲೇಜುಗಳನ್ನು ಪ್ರಾರಂಭಿಸಲು ಅವಶ್ಯವಿರುವ ಮೂಲಭೂತ ಸೌಕರ್ಯ ಹಾಗೂ ಬೋಧಕ ಸಿಬ್ಬಂದಿಗಳ ಕೊರತೆ ಇದ್ದರೂ ಕೂಡ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ಅನುಮತಿ ನೀಡಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

ಆ) **ಶ್ರೀ ಎಂ.ನಾರಾಯಣಸ್ವಾಮಿ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರು,** ಬೆಂಗಳೂರು ಪೂರ್ವ ತಾಲ್ಲೂಕಿನ ಕೆ.ಆರ್. ಪುರಂ ವಾರ್ಡ್ ಸಂಖ್ಯೆ 53ನೇ ವ್ಯಾಪ್ತಿಯ ಬಸವನಪುರ ಗ್ರಾಮದ ಸರ್ವೆ ನಂ.26/01ರಲ್ಲಿ ನಾಲ್ಕು ಎಕರೆ ವಿಸ್ತೀರ್ಣದ ಜಮೀನಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ದಾವೆ ಇದ್ದರು ಅಲ್ಲಿನ ಜಿಲ್ಲಾಧಿಕಾರಿಗಳು ಕಾನೂನು ಬಾಹಿರವಾಗಿ ಭೂಪರಿವರ್ತನೆ ಆದೇಶ ಹೊರಡಿಸಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಇ) **ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು** ಅವರು ಉತ್ತರ ಕರ್ನಾಟಕ ಭಾಗದ ಅಭಿವೃದ್ಧಿ ದೃಷ್ಟಿಯಿಂದ ಪ್ರಮುಖ ಇಲಾಖೆಗಳ ವಿಭಾಗೀಯ ಕಛೇರಿ ಹಾಗೂ ಪ್ರಾದೇಶಿಕ ಆಡಳಿತ ಕಛೇರಿಯನ್ನು ನಿರ್ಮಿಸಲು ಹಾಗೂ ಸುವರ್ಣ ವಿಧಾನ ಸೌಧವನ್ನು ಸದ್ಬಳಕೆ ಮಾಡಿಕೊಳ್ಳುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಈ) **ಶ್ರೀ ಹೆಚ್.ಎಂ.ರಮೇಶ್‌ಗೌಡ** ಅವರು ಬೆಂಗಳೂರು ಜಲಮಂಡಳಿಯವರು ನೀರಿನ ಸಂಪರ್ಕ ಮತ್ತು ಒಳಚರಂಡಿ ವ್ಯವಸ್ಥೆಯನ್ನು ಪಡೆದವರಿಗೆ ಹಾಗೂ ಪಡೆಯದವರಿಗೆ ನೋಟೀಸ್ ಜಾರಿ ಮಾಡಿರುವುದರಿಂದ ಸಾರ್ವಜನಿಕರು ಆತಂಕಕ್ಕೊಳಗಾಗಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

ಅ) **ಶ್ರೀಯುತರುಗಳಾದ ಕೆ.ಎ. ತಿಪ್ಪೇಸ್ವಾಮಿ, ಎನ್. ಅಪ್ಪಾಜಿಗೌಡ, ಕೆ.ಟಿ. ಶ್ರೀಕಂಠೇಗೌಡ, ಗೋವಿಂದರಾಜು** ಅವರುಗಳು ರಾಜ್ಯದಲ್ಲಿ ವ್ಯಾಪಕವಾಗಿ ಹರಡುತ್ತಿರುವ ಕೋವಿಡ್-19 ಸಾಂಕ್ರಾಮಿಕ ರೋಗದ ಪರಿಣಾಮದಿಂದಾಗಿ ಲಾಕ್‌ಡೌನ್ ವಿಧಿಸಲಾಗಿ ಶಾಲಾ ಮಕ್ಕಳ ಕಲಿಕೆಯಲ್ಲಿ ತೀವ್ರ ಹಿನ್ನಡೆ ಉಂಟಾಗಿರುವುದರಿಂದ ವಿದ್ಯಾರ್ಥಿಗಳ ಕುಟುಂಬಗಳ ಸ್ಥಿತಿ, ಆರ್ಥಿಕ ಸಂಕಷ್ಟ ಹಾಗೂ ಜೀವನ ಶೈಲಿಗಳ ಕುರಿತಂತೆ ಸಮಗ್ರ ಸಮೀಕ್ಷೆ ನಡೆಸುವ ಕುರಿತು ಪ್ರಸ್ತಾಪಿಸುವುದು.

ಆ) **ಶ್ರೀಯುತರುಗಳಾದ ಎಸ್.ವ್ಹಿ. ಸಂಕನೂರ ಮತ್ತು ನಿರಾಣಿ ಹಣಮಂತ್ ರುದ್ರಪ್ಪ** ಅವರುಗಳು ಪದವಿ ಪೂರ್ವ ಶಿಕ್ಷಣ ಇಲಾಖೆಯ ದಿನಾಂಕ:27.09.2018ರಂದು ಹೊರಡಿಸಿರುವ ಆದೇಶ ಸಂಖ್ಯೆ ಇಡಿ/107/ಟಿಪಿಯು/2017 ರ ಪ್ರಕಾರ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ತೊಂದರೆಯಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

ಇ) **ಶ್ರೀ ಎಸ್.ಆರ್ ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು** ಅವರು ರಾಜ್ಯದಲ್ಲಿನ ಪೊಲೀಸ್ ಸಿಬ್ಬಂದಿಗಳ ವೇತನ ಪರಿಷ್ಕರಣೆಗೆ ಸಂಬಂಧಿಸಿದಂತೆ ಶ್ರೀ ರಾಘವೇಂದ್ರ ಔರದ್ಕರ್‌ರವರ ವರದಿಗೆ ವ್ಯತಿರಿಕ್ತವಾಗಿ ಆರ್ಥಿಕ ಇಲಾಖೆ ಹೊರಡಿಸಿರುವ ಮತ್ತೊಂದು ಆದೇಶದ ಪರಿಣಾಮವಾಗಿ ಅನೇಕ ವರ್ಷ ಸೇವೆ ಸಲ್ಲಿಸಿರುವ ಹಿರಿಯ ಸಿಬ್ಬಂದಿಗಳಿಗೆ ಹಾಗೂ ಹೊಸದಾಗಿ ಸೇವೆಗೆ ಸೇರಿರುವ ಸಿಬ್ಬಂದಿಗಳಿಗೆ ಸಮಾನ ವೇತನ ನಿಗದಿಯಾಗಿರುವುದರಿಂದ ತಾರತಮ್ಯವಾಗಿರುವ ವಿಷಯದ ಬಗ್ಗೆ ಪ್ರಸ್ತಾಪಿಸುವುದು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**